**<u>ದಿನಾಂಕಃ 19.02.2026 ರಂದು ಸಾಕ್ಷಿಯನ್ನು ಕರೆಸಿ ಪ್ರಮಾಣ ವಚನ ಬೋಧಿಸಲಾಯಿತು.</u>**

**<u>ಪಾಟೀ ಸವಾಲುಃ 1ನೇ ಎದುದಾರರ ಪರ ಮಾನ್ಯ ವಕೀಲರಿಂದ.</u>**

ನಾನು ಅರ್ಜಿಯಲ್ಲಿ ನೀಡಿರುವ ವಿಳಾಸದಲ್ಲಿ ವಾಸವಾಗಿದ್ದೇನೆ. ದಿನಾಂಕ 28.04.2025ರಂದು ಅಪಘಾತ ಸಂಭವಿಸಿರುತ್ತದೆ. ಅಪಘಾತ ರಾತ್ರಿ 10.45 ಗಂಟೆಗೆ ಸಂಭವಿಸಿತು, ನನಗೆ ತಡರಾತ್ರಿ 1 ಗಂಟೆಯ ಸಮಯದಲ್ಲಿ ನನಗೆ ಮಾಹಿತಿ ಬಂದಿರುತ್ತದೆ. ಅಪಘಾತದ ಬಗ್ಗೆ ನನ್ನ ಅತ್ತೆ ಗಣೇಶಮ್ಮ ರವರು ಕರೆ ಮಾಡಿ ನನಗೆ ತಿಳಿಸಿರುತ್ತಾರೆ. ಆ ಸಂದರ್ಭದಲ್ಲಿ ನಾನು ನಮ್ಮ ಮನೆಯಲ್ಲಿ ಇದ್ದೆನು. ನನ್ನ ಗಂಡ ಹೋಗುತ್ತಿದ್ದ ಬೈಕು ಸಂತೋಷ್ ಪಠಾಣ್ ರವರಿಗೆ ಸೇರಿದ್ದು. ಸದರಿಯವರು ಬಿಜಾಪುರದವರು. ಅವರು ನನ್ನ ಗಂಡನ ಸ್ನೇಹಿತ ಎಂದರೆ ಸರಿಯಲ್ಲ. ಸದರಿಯವರ ಪರಿಚಯ ನನ್ನ ಗಂಡನಿಗೆ ಇದ್ದು, ನನಗೆ ಇಲ್ಲ.

ನಿಪಿ 4 ರ ರೀತ್ಯ ನನ್ನ ಗಂಡ ಹೋಗುತ್ತಿದ್ದ ಮಾರ್ಗ ವಿಭಜಕದ ಬಲಭಾಗಕ್ಕೆ ಅಂದರೆ ದೊಡ್ಡಬಳ್ಳಾಪುರದಿಂದ ಬೆಂಗಳೂರಿಗೆ ಬರುವ ಮಾರ್ಗ ಎಂದರೆ ಸರಿ. ಅಪಘಾತವಾದ ಸ್ಥಳದಲ್ಲಿ ಯೂ ತಿರುವು ತೆಗೆದುಕೊಳ್ಳಲು ಸೂಚನೆ ಇಲ್ಲ ಎಂದರೆ ಸಾಕ್ಷಿಯು ನಿಪಿ 4 ರಲ್ಲಿ ಕಂಡುಬರುವುದಿಲ್ಲ, ಆದರೆ ತಿರುವು ತೆಗೆದುಕೊಳ್ಳಲು ಅವಕಾಶ ಇದೆ ಎಂದು ನುಡಿಯುತ್ತಾರೆ. ಅಪಘಾತ ಬೆಂಗಳೂರಿನಿಂದ ದೊಡ್ಡಬಳ್ಳಾಪುರದ ಕಡೆಗೆ ಹೋಗುವ ಮಾರ್ಗದ ಎಡಭಾಗದಲ್ಲಿ ಸಂಭವಿಸಿದೆ ಎಂದರೆ ಸರಿ. ಸಂತೋಷ್ ರವರು ವಾಹನ ಚಾಲನೆ ಮಾಡುತ್ತಿದ್ದು, ಅವರಿಗೆ ಪರವಾನಗಿ ಇತ್ತೋ, ಇಲ್ಲವೋ ಎಂದು ನನಗೆ ಗೊತ್ತಿಲ್ಲ. ಆ ದಿನ ನನ್ನ ಗಂಡ ಮತ್ತು ಸಂತೋಷ್ ರವರು ಹೆಲ್ಮೆಟ್ ಧರಿಸಿರಲಿಲ್ಲ ಎಂದರೆ ಸರಿಯಲ್ಲ. ಸಂತೋಷ್ ರವರು ಅಜಾಗರೂಕತೆಯಿಂದ ವಾಹನವನ್ನು ಚಾಲನೆ ಮಾಡಿಕೊಂಡು ಹೋದ ಕಾರಣ ಅಪಘಾತವಾಗಿದೆ ಎಂದರೆ ಸರಿಯಲ್ಲ. ಸಂತೋಷ್ ರವರು ತಪ್ಪಾದ ಮಾರ್ಗದಲ್ಲಿ ವಾಹನ ಚಾಲನೆ ಮಾಡಿಕೊಂಡ ಪರಿಣಾಮ ಅಪಘಾತವಾಗಿರುತ್ತದೆ

ಎಂದರೆ ಸರಿಯಲ್ಲ. 1ನೇ ಎದುರುದಾರರು ನಿಯಮಾನುಸಾರ ನಿಧಾನಗತಿಯಲ್ಲಿ ವಾಹನ ಚಾಲನೆ ಮಾಡಿಕೊಂಡು ಬರುತ್ತಿದ್ದರು ಎಂದರೆ ಸರಿಯಲ್ಲ. 1ನೇ ಎದುರುದಾರರ ತಪ್ಪಿ ನಿಂದ ಅಪಘಾತವಾಗಿಲ್ಲ ಎಂದರೆ ಸರಿಯಲ್ಲ. ಅಪಘಾತವಾದಾಗ ನಾನು ಸ್ಥಳದಲ್ಲಿ ಇರಲಿಲ್ಲ ಎಂದರೆ ಸರಿ. ಪರಿಹಾರ ಪಡೆಯುವ ಉದ್ದೇಶದಿಂದ ಸುಳ್ಳು ಪ್ರಮಾಣ ಪತ್ರ ಸಲ್ಲಿಸಿ ಸುಳ್ಳು ಸಾಕ್ಷ ನುಡಿಯುತ್ತಿದ್ದೇನೆ ಎಂದರೆ ಸರಿಯಲ್ಲ.

**(ನನ್ನ ಉಕ್ತಲೇಖನದಂತೆ ತೆರೆದ ನ್ಯಾಯಾಲಯದಲ್ಲಿ ಬೆರಳಚ್ಚು ಮಾಡಿಸಲ್ಪಟ್ಟಿದೆ).**

**(ಓ.ಹೇ.ಕೇ.ಸ.ಇ.)**

**1ನೇ ಎಸ್‌ಸಿಜೆ ಮತ್ತು ಎಸಿಜೆಎಮ್**

**ಬೆಂಗಳೂರು**